## All India Radio: Bangalore

## National Bulletin In Kannada
## 26.02.2026  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

## 26.02.2026  07.35 a.m.

**<><><><>**

ಮುಖ್ಯಾಂಶಗಳು

1 ಪ್ರಧಾನಿ ನರೇಂದ್ರ ಮೋದಿ ಹಾಗೂ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮಾತುಕತೆ ; ಕೃಷಿ, ತಂತ್ರಜ್ಞಾನ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ವಿಸ್ತರಿಸುವ ಬಗ್ಗೆ ಚರ್ಚೆ

2 ಭಾರತ ಮತ್ತು ಇಸ್ರೇಲ್ ನಡುವಿನ ಕಾರ್ಯತಂತ್ರದ ಕೊಡುಗೆ ; ಪ್ರಧಾನಿಯವರಿಗೆ ಇಸ್ರೇಲ್ ಸಂಸತ್ತಿನಿಂದ ಸ್ಪೀಕರ್ ಆಫ್ ದಿ ನೆಸ್ಸೆಟ್ ಗೌರವ

3 ಕೇಂದ್ರ ಆರೋಗ್ಯ ಸಚಿವಾಲಯದ ಅಧೀನದಲ್ಲಿರುವ ಸ್ವಾಯತ್ತ ಸಂಸ್ಥೆಯಾದ ರಾಷ್ಟ್ರೀಯ ವೈದ್ಯಕೀಯ ವಿಜ್ಞಾನ ಪರೀಕ್ಷಾ ಮಂಡಳಿಗೆ ಗಿನ್ನೆಸ್ ದಾಖಲೆ

4 ಎಫ್ಐಹೆಚ್ ಪುರುಷರ ಪ್ರೊ ಲೀಗ್ ಹಾಕಿ ; ಆಸ್ಟ್ರೇಲಿಯಾ ವಿರುದ್ಧ  ಭಾರತಕ್ಕೆ ೩-೧ ಗೋಲುಗಳ ಜಯ

<><><><>

ಇಸ್ರೇಲ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಟೆಲ್ ಅವೀವ್‌ನಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಮಾತುಕತೆ ನಡೆಸಿದರು. ಉಭಯ ನಾಯಕರು ಭಾರತ-ಇಸ್ರೇಲ್ ದ್ವಿಪಕ್ಷೀಯ ಸಂಬಂಧಗಳನ್ನು ಸಂಪೂರ್ಣವಾಗಿ ಪರಿಶೀಲಿಸಿದರು. ಮುಖ್ಯವಾಗಿ ಜಲ ಸಂಪನ್ಮೂಲ ನಿರ್ವಹಣೆ, ಕೃಷಿ, ತಂತ್ರಜ್ಞಾನ ಮತ್ತು ಇತರ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸುವ ಬಗ್ಗೆ ಚರ್ಚೆ ನಡೆಸಿದರು. ಪ್ರಧಾನಿಯವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ನೆತನ್ಯಾಹು ಅವರೊಂದಿಗೆ ಅತ್ಯುತ್ತಮ ಸಭೆ ನಡೆಸಲಾಗಿದೆ ಹಾಗೂ ಚರ್ಚೆಯ ಸಮಯದಲ್ಲಿ ತಂತ್ರಜ್ಞಾನ, ಜಲ ಸಂಪನ್ಮೂಲ ನಿರ್ವಹಣೆ, ಕೃಷಿ, ಮಾನವ ಬಂಡವಾಳ ಅಭಿವೃದ್ಧಿಯಲ್ಲಿ ಸಹಕಾರ ಮತ್ತು ಸಹಯೋಗವನ್ನು ವಿಸ್ತರಿಸಲು ಗಮನಾರ್ಹ ಸಾಮರ್ಥ್ಯವಿರುವ ಇತರ ಕ್ಷೇತ್ರಗಳು ಗಮನ ಸೆಳೆದವು ಎಂದು ತಿಳಿಸಿದ್ದಾರೆ. ಜೆರುಸಲೆಮ್‌ನಲ್ಲಿರುವ ಇಸ್ರೇಲಿ

ಸಂಸತ್ತು, ನೆಸ್ಸೆಟ್‌ಅನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಸದನದ ಮುಂದೆ ನಿಲ್ಲುವುದು ತಮಗೆ ದೊರೆತ ಗೌರವ ಎಂದು ಅಭಿಪ್ರಾಯಪಟ್ಟಿದ್ದಾರೆ. ಬಳಿಕ ಅವರು, ೧.೪ ಬಿಲಿಯನ್ ಭಾರತೀಯರ ಶುಭಾಶಯಗಳನ್ನು ಮತ್ತು ಸ್ನೇಹ, ಗೌರವ ಮತ್ತು ಪಾಲುದಾರಿಕೆಯ ಸಂದೇಶವನ್ನು ಸಭೆಗೆ ನೀಡಿದ್ದಾರೆ.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (೨೩ ಸೆಕೆಂಡ್‌ಗಳು)**

ಅಕ್ಟೋಬರ್ ೭ರಂದು ಹಮಾಸ್ ನಡೆಸಿದ ಭಯೋತ್ಪಾದಕ ದಾಳಿಯಲ್ಲಿ ಮಡಿದ ಜೀವಗಳಿಗೆ ಸಂತಾಪ ಸೂಚಿಸಿದ ಪ್ರಧಾನಿ ಮೋದಿಯವರು ಭಾರತೀಯರು ಸಹ ಇಸ್ರೇಲ್ ನೊಂದಿಗೆ ಈ ದುಃಖವನ್ನು ಹಂಚಿಕೊಳ್ಳುತ್ತಾರೆ ಎಂದು ಹೇಳಿದರು. ನಾಗರಿಕರ ಹತ್ಯೆಯನ್ನು ಯಾವುದೇ ಕಾರಣಕ್ಕೂ ಸಮರ್ಥಿಸಿಕೊಳ್ಳಲು ಸಾಧ್ಯವಿಲ್ಲ, ಹಾಗೆಯೇ ಭಯೋತ್ಪಾದನೆಯನ್ನು ಸಹ ಸಮರ್ಥಿಸಲು ಸಾಧ್ಯವಿಲ್ಲ ಎಂದ ಪ್ರಧಾನಿ, ಭಾರತವು ದೀರ್ಘಕಾಲದವರೆಗೆ ಭಯೋತ್ಪಾದನೆಯ ನೋವನ್ನು ಸಹಿಸಿಕೊಂಡಿದೆ ಎಂದು ಹೇಳಿದರು. ೨೬/೧೧ ಮುಂಬೈ ದಾಳಿ ಮತ್ತು ಇಸ್ರೇಲಿ ನಾಗರಿಕರು ಸೇರಿದಂತೆ ಮುಗ್ಧ ಜೀವಗಳನ್ನು ಕಳೆದುಕೊಂಡದ್ದನ್ನು ಅವರು ಉಲ್ಲೇಖಿಸಿದರು. ಭಾರತವು ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆಯ ಸ್ಥಿರ ಮತ್ತು ರಾಜಿಯಾಗದ ನೀತಿಯನ್ನು ಹೊಂದಿದೆ. ಯಾವುದೇ ದ್ವಿಮುಖ ಮಾನದಂಡಗಳನ್ನು ಹೊಂದಿಲ್ಲ ಎಂದು ಅವರು ಹೇಳಿದರು. ಭಯೋತ್ಪಾದನೆಯು ಸಮಾಜವನ್ನು ಅಸ್ಥಿರಗೊಳಿಸುವ, ಅಭಿವೃದ್ಧಿಯನ್ನು ತಡೆಯುವ ಮತ್ತು ನಂಬಿಕೆಯನ್ನು ನಾಶಮಾಡುವ ಗುರಿಯನ್ನು ಹೊಂದಿದೆ. ಭಯೋತ್ಪಾದನೆಯನ್ನು ಎದುರಿಸಲು ನಿರಂತರ ಮತ್ತು ಸಂಘಟಿತ ಜಾಗತಿಕ ಕ್ರಮದ ಅಗತ್ಯವಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಭಾರತ ಮತ್ತು ಇಸ್ರೇಲ್ ನಡುವಿನ ಕಾರ್ಯತಂತ್ರದ ಸಂಬಂಧಗಳನ್ನು ಬಲಪಡಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಅಸಾಧಾರಣ ಕೊಡುಗೆಯನ್ನು ಗುರುತಿಸಿ ಇಸ್ರೇಲ್ ಅವರಿಗೆ ಸ್ಪೀಕರ್ ಆಫ್ ದಿ ನೆಸ್ಸೆಟ್ ಪದಕವನ್ನು ನೀಡಿ ಗೌರವಿಸಿದೆ. ಈ ಪದಕವನ್ನು ಪಡೆದ ಮೊದಲ ನಾಯಕ ಭಾರತದ ಪ್ರಧಾನಿ. ಇದು ನೆಸ್ಸೆಟ್, ಇಸ್ರೇಲ್ ಸಂಸತ್ತಿನ ಅತ್ಯುನ್ನತ ಗೌರವವಾಗಿದೆ. ಪ್ರಧಾನಿ ಮೋದಿ ಅವರು ಇಸ್ರೇಲ್ ಸಂಸತ್ತಿನಲ್ಲಿ ಮಾಡಿದ ಭಾಷಣದ ನಂತರ ನೆಸ್ಸೆಟ್ ಸ್ಪೀಕರ್ ಅಮೀರ್ ಒಹಾನಾ ಅವರು ಈ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಭಾರತ ಮತ್ತು ಇಸ್ರೇಲ್ ನಡುವಿನ

ಕಾರ್ಯತಂತ್ರದ ಸಂಬಂಧಗಳನ್ನು ಬಲಪಡಿಸಲು ಪ್ರಧಾನ ಮಂತ್ರಿಯವರು ತಮ್ಮ ವೈಯಕ್ತಿಕ ನಾಯಕತ್ವದ ಮೂಲಕ ನೀಡಿದ ಅಸಾಧಾರಣ ಕೊಡುಗೆಯನ್ನು ಗುರುತಿಸಿ ಈ ಪದಕವನ್ನು ಪ್ರದಾನ ಮಾಡಲಾಯಿತು. ಈ ಗೌರವವು ಒಬ್ಬ ವ್ಯಕ್ತಿಗೆ ಸಲ್ಲಿಸುವ ಗೌರವವಲ್ಲ, ಬದಲಾಗಿ ಭಾರತ ಮತ್ತು ಇಸ್ರೇಲ್ ನಡುವಿನ ಶಾಶ್ವತ ಸ್ನೇಹಕ್ಕಾಗಿ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ರಕ್ಷಣೆ, ತಂತ್ರಜ್ಞಾನ, ಕೃಷಿ, ನಾವೀನ್ಯತೆ ಮತ್ತು ಆರ್ಥಿಕ ಸಹಕಾರದಾದ್ಯಂತ ದ್ವಿಪಕ್ಷೀಯ ಸಂಬಂಧಗಳನ್ನು ಗಾಢವಾಗಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಪಾತ್ರವನ್ನು ನೆಸ್ಸೆಟ್ ಪ್ರಶಸ್ತಿ ಎತ್ತಿ ತೋರಿಸಿದೆ. ಪ್ರಧಾನಿಯವರಿಗೆ ನೆಸ್ಸೆಟ್ ಸ್ಪೀಕರ್ ಪದಕ ನೀಡಿರುವುದು ಅವರ ರಾಜನೀತಿಯನ್ನು ಎತ್ತಿ ತೋರಿಸುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಇದು ಪರಸ್ಪರ ಸಬಲೀಕರಣಕ್ಕಾಗಿ ರಾಷ್ಟ್ರಗಳ ನಡುವೆ ಸಂಪರ್ಕವನ್ನು ಬೆಳೆಸುವ ಮತ್ತು ಮಾನವೀಯತೆಯ ಕಲ್ಯಾಣವನ್ನು ಮುನ್ನಡೆಸುವ ಅವರ ರಾಜನೀತಿಯನ್ನು ಎತ್ತಿ ತೋರಿಸುತ್ತದೆ ಎಂದು ಅಮಿತ್ ಶಾ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಎಲ್ಲರ ಕಲ್ಯಾಣಕ್ಕಾಗಿ ಮಾನವಕುಲದ ಉದ್ದೇಶವನ್ನು ಮುನ್ನಡೆಸಲು ಪರಸ್ಪರ ಸಬಲೀಕರಣಕ್ಕಾಗಿ ರಾಷ್ಟ್ರಗಳ ನಡುವೆ ಸೇತುವೆಗಳನ್ನು ರೂಪಿಸುವ ನಮ್ಮ ಪ್ರಧಾನಮಂತ್ರಿಯ ರಾಜನೀತಿಯನ್ನು ಇದು ಉದಾಹರಣೆಯಾಗಿ ತೋರಿಸುತ್ತದೆ.

<><><><>

ಆರೋಗ್ಯ ರಕ್ಷಣೆಯಲ್ಲಿ ಕೃತಕ ಬುದ್ಧಿಮತ್ತೆ ಪಾಠದ ನೇರ ಪ್ರಸಾರವನ್ನು ಯೂಟ್ಯೂಬ್‌ನಲ್ಲಿ ಹೆಚ್ಚಿನ ವೀಕ್ಷಕರಿಗೆ ತಲುಪಿಸಿದ ಹಿನ್ನೆಲೆ ಕೇಂದ್ರ ಆರೋಗ್ಯ ಸಚಿವಾಲಯದ ಅಧೀನದಲ್ಲಿರುವ ಸ್ವಾಯತ್ತ ಸಂಸ್ಥೆಯಾದ ರಾಷ್ಟ್ರೀಯ ವೈದ್ಯಕೀಯ ವಿಜ್ಞಾನ ಪರೀಕ್ಷಾ ಮಂಡಳಿ - ಎನ್‌ಬಿಇಎಂಎಸ್ ಗಿನ್ನೆಸ್ ವಿಶ್ವ ದಾಖಲೆ ಮಾಡಿದೆ. ಆರೋಗ್ಯ ರಕ್ಷಣೆಯಲ್ಲಿ ಕೃತಕ ಬುದ್ಧಿಮತ್ತೆಯ ಕುರಿತು ರಾಷ್ಟ್ರವ್ಯಾಪಿ ಆನ್‌ಲೈನ್ ತರಬೇತಿ ಕಾರ್ಯಕ್ರಮದ ಯಶಸ್ವಿ ಅನುಷ್ಠಾನದ ಮೂಲಕ ಈ ದಾಖಲೆಯನ್ನು ಸಾಧಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ದೇಶಾದ್ಯಂತ ನೋಂದಾಯಿತ ವೈದ್ಯಕೀಯ ವೃತ್ತಿಪರರಿಗಾಗಿ ಈ ಕಾರ್ಯಕ್ರಮವನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ. ಗಿನ್ನೆಸ್ ವಿಶ್ವ ದಾಖಲೆಯಿಂದ ಈ ಮನ್ನಣೆ ಕೇವಲ ದಾಖಲೆಯಲ್ಲ. ಆದರೆ ವೈದ್ಯಕೀಯ ಶಿಕ್ಷಣದಲ್ಲಿ ಡಿಜಿಟಲ್ ನಾವೀನ್ಯತೆಯನ್ನು ಅಳವಡಿಸಿಕೊಳ್ಳುವಲ್ಲಿ ಭಾರತದ

ನಾಯಕತ್ವಕ್ಕೆ ಸಾಕ್ಷಿಯಾಗಿದೆ ಎಂದು ಎನ್‌ಬಿಇಎಂಎಸ್ ಅಧ್ಯಕ್ಷ ಡಾ. ಅಭಿಜಿತ್ ಶೇಠ್ ಹೇಳಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇನ್‌ಸ್ಟಾಗ್ರಾಮ್‌ನಲ್ಲಿ ೧೦೦ ಮಿಲಿಯನ್ ಫಾಲೋವರ್‌ಗಳ ಐತಿಹಾಸಿಕ ಮೈಲಿಗಲ್ಲನ್ನು ದಾಟಿದ್ದಾರೆ. ಇದರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಇನ್ಸ್‌ಸ್ಟಾಗ್ರಾಮ್‌ನಲ್ಲಿ ಈ ಸಾಧನೆ ಮಾಡಿದ ಮೊದಲ ವಿಶ್ವ ನಾಯಕ ಮತ್ತು ರಾಜಕಾರಣಿಯಾಗಿದ್ದಾರೆ. ಪ್ರಧಾನಿ ಮೋದಿ ೨೦೧೪ ರಲ್ಲಿ ಇನ್‌ಸ್ಟಾಗ್ರಾಮ್ ಖಾತೆ ಆರಂಭಿಸಿದ ಪ್ರಧಾನಿ ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗಿಂತ ಎರಡು ಪಟ್ಟು ಹೆಚ್ಚು ಫಾಲೋವರ್‌ಗಳನ್ನು ಹೊಂದಿದ್ದಾರೆ. ಮುಂದಿನ ಐದು ಪ್ರಮುಖ ವಿಶ್ವ ನಾಯಕರ ಒಟ್ಟು ಫಾಲೋವರ್‌ಗಳ ಸಂಖ್ಯೆ ಪ್ರಧಾನಿ ಮೋದಿ ಅವರ ವೈಯಕ್ತಿಕ ಫಾಲೋವರ್‌ಗಳ ಸಂಖ್ಯೆಗಿಂತ ಕಡಿಮೆಯಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ೪೩.೨ ಮಿಲಿಯನ್ ಫಾಲೋವರ್‌ಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ಪ್ರಧಾನಿ ಇನ್‌ಸ್ಟಾಗ್ರಾಮ್‌ನಲ್ಲಿ ಇತರ ಭಾರತೀಯ ರಾಜಕೀಯ ನಾಯಕರಿಗಿಂತ ಮುಂದಿದ್ದಾರೆ. ಎರಡನೇ ಸ್ಥಾನದಲ್ಲಿರುವ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸುಮಾರು ೧೬.೧ ಮಿಲಿಯನ್ ಫಾಲೋವರ್‌ಗಳನ್ನು ಹೊಂದಿದ್ದಾರೆ.

<><><><>

ಭಾರತವು ಸಂಘರ್ಷಕ್ಕಿಂತ ಸಂವಾದಕ್ಕೆ, ವಿಭಜನೆಗಿಂತ ಒಮ್ಮತಕ್ಕೆ ಮತ್ತು ಸಂಕುಚಿತ ಹಿತಾಸಕ್ತಿಗಳಿಗಿಂತ ಮಾನವ ಕೇಂದ್ರಿತ ಅಭಿವೃದ್ಧಿಗೆ ಸದಾ ಒತ್ತು ನೀಡಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ಮಾನವ ಹಕ್ಕುಗಳ ಮಂಡಳಿಯ ೬೧ನೇ ಅಧಿವೇಶನದ ಉನ್ನತ ಮಟ್ಟದ ಸಭೆಯಲ್ಲಿ ಮಾತನಾಡಿದ ಅವರು, ಸಂಘರ್ಷ, ಧ್ರುವೀಕರಣ ಮತ್ತು ಅನಿಶ್ಚಿತತೆಯಿಂದ ಕೂಡಿದ ಜಗತ್ತಿನಲ್ಲಿ ಸಾಮಾನ್ಯ ನೆಲೆಯನ್ನು ಕಂಡುಕೊಳ್ಳಲು ಮತ್ತು ವಿಸ್ತರಿಸಲು ಭಾರತ ಬಯಸುತ್ತದೆ ಎಂದು ಪ್ರತಿಪಾದಿಸಿದರು. ಯಾವುದೇ ಪ್ರದೇಶದ ಅಭದ್ರತೆ ಅಥವಾ ಯಾವುದೇ ಗುಂಪಿನ ಅಂಚಿನಲ್ಲಿಡುವಿಕೆ ಅಂತಿಮವಾಗಿ ಎಲ್ಲರ ಹಕ್ಕುಗಳು ಮತ್ತು ಕ್ಷೇಮವನ್ನು ಕುಂಠಿತಗೊಳಿಸುತ್ತದೆ ಎಂಬ ತಿಳುವಳಿಕೆಯಲ್ಲಿ ಭಾರತದ ದೃಷ್ಟಿಕೋನವು ಅಡಗಿದೆ ಎಂದು ಅವರು ವಿವರಿಸಿದರು. ಭಯೋತ್ಪಾದನೆಯ ಎಲ್ಲಾ ರೂಪಗಳು

ಮತ್ತು ಅಭಿವ್ಯಕ್ತಿಗಳನ್ನು ವಿರೋಧಿಸುವಲ್ಲಿ ಭಾರತವು ದೃಢವಾಗಿದೆ ಮತ್ತು ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ. ಭಯೋತ್ಪಾದನೆಯು ಮಾನವ ಹಕ್ಕುಗಳ ಅತ್ಯಂತ ಗಂಭೀರ ಉಲ್ಲಂಘನೆಗಳಲ್ಲಿ ಒಂದಾಗಿದೆ ಮತ್ತು ವಿಶೇಷವಾಗಿ ಅಮಾಯಕ ಪ್ರಾಣಗಳನ್ನು ಗುರಿಯಾಗಿಸಿಕೊಂಡಾಗ ಅದಕ್ಕೆ ಯಾವುದೇ ಸಮರ್ಥನೆ ಇರಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ.

<><><><>

ಆಸ್ಟ್ರೇಲಿಯಾದ ಹೋಬಾರ್ಟನಲ್ಲಿ ನಡೆದ ಎಫ್ಐಹೆಚ್ ಪುರುಷರ ಪ್ರೊ ಲೀಗ್‌ನ ಹಾಕಿಯಲ್ಲಿ ಭಾರತ ತಂಡವು ೨೦೨೫-೨೬ರಲ್ಲಿ ಆಸ್ಟ್ರೇಲಿಯಾ ತಂಡದ ವಿರುದ್ಧ ೩-೧ ಗೋಲುಗಳಿಂದ ಜಯಗಳಿಸಿದೆ. ಈ ಮೂಲಕ ಬೋನಸ್ ಪಾಯಿಂಟ್ ಗಳಿಸಿತು. ೫೧ನೇ ನಿಮಿಷದಲ್ಲಿ ಶಿಲಾನಂದ್ ಲಾಕ್ರ ಭಾರತ ಪರ ಗೋಲು ಗಳಿಸಿದರೆ, ೪೯ನೇ ನಿಮಿಷದಲ್ಲಿ ನಾಯಕ ಜೆರೆಮಿ ಹೇವರ್ಡ್ ಆಸ್ಟ್ರೇಲಿಯಾ ಪರ ಗೋಲು ಗಳಿಸಿದರು. ನಂತರ ಶೂಟೌಟ್ ಸಮಯದಲ್ಲಿ ಶಿಲಾನಂದ್ ಲಾಕ್ರ, ಮಣಿಂದರ್ ಸಿಂಗ್ ಮತ್ತು ವಿಷ್ಣುಕಾಂತ್ ಸಿಂಗ್ ಕ್ರಮವಾಗಿ ಒಂದೊಂದು ಗೋಲು ಗಳಿಸಿದರು. ಯುವ ಗೋಲ್‌ಕೀಪರ್ ಮೋಹಿತ್.ಎಚ್.ಎಸ್ ಅವರು ಭಾರತವು ಪಂದ್ಯದಿಂದ ಎರಡು ಅಂಕಗಳನ್ನು ಪಡೆಯುವಂತೆ ಮಾಡಿದರು.

<><><><>

ಇಂದು ಅಂಡಮಾನ್ ಮತ್ತು ನಿಕೋಬಾರ್‌ನಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಒಳನಾಡು ಕರ್ನಾಟಕ ಮತ್ತು ತೆಲಂಗಾಣದಲ್ಲಿಂದು ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಲ್ಲಿ ನಾಳೆಯವರೆಗೆ ಹಗುರ ಮಳೆ ಅಥವಾ ಹಿಮಪಾತವಾಗಲಿದೆ ಎಂದು ಇಲಾಖೆ ತಿಳಿಸಿದೆ. ಪಂಜಾಬ್ ಮತ್ತು ಹಿಮಾಚಲ ಪ್ರದೇಶದಲ್ಲಿ ಇಂದು ಬೆಳಗಿನ ಅವಧಿಯಲ್ಲಿ ದಟ್ಟ ಮಂಜಿನ ವಾತಾವರಣವಿರಲಿದ್ದು, ದೇಶದ ವಾಯವ್ಯ ಭಾಗಗಳಲ್ಲಿ ಮುಂದಿನ ಏಳು ದಿನಗಳಲ್ಲಿ ಗರಿಷ್ಠ ತಾಪಮಾನವು ಹಂತ ಹಂತವಾಗಿ ಎರಡು ಮೂರು ಡಿಗ್ರಿ ಸೆಲ್ಸಿಯಸ್‌ನಷ್ಟು ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>